

ಅರುಣ ಪಿ. ಭಟ್ಟ



## ವಾರಭವಿಷ್ಯ: 17.04.2025ರಿಂದ 23.04.2025ರವರೆಗೆ





ಸ್ವಂತ ಉದ್ಯೋಗದಲ್ಲಿ ನಿರತರಾದವರಿಗೆ ಉತ್ತಮವಾದ ದಿನಗಳಿವು. ಉದ್ಯೋಗ ಸ್ಥಳದಲ್ಲಿ ನಿಮ್ಮ ಪಾಲಿನ ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆಗಳಿವೆ. ಸೇವಾ ವಲಯ ಹಾಗೂ ಉದ್ಯಮ, ವ್ಯಾಪಾರ ಮಾಡುವವರಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ವಿರೋಧಿಗಳು ನಿಮಗೆ ಸಮಸ್ಯೆ ಮಾಡಲು ಪ್ರಯತ್ನಿಸಬಹುದು. ಶುಭದಿನ: **20.** ಕನಕಧಾರಾ ಸ್ತೋತ್ರ ಪಠಿಸಿರಿ.

---




ಪ್ರೀತಿಪಾತ್ರರೊಂದಿಗೆ ಉತ್ತಮ ಸಮಯ ಕಳೆಯಲಿದ್ದೀರಿ. ಸೋದರ ಸೋದರಿಯರ ಜೊತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಸಾಮಾಜಿಕ ಕಾರ್ಯಗಳಲ್ಲಿ ಹೆಚ್ಚು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಹೆಸರಾಂತ ಸಂಸ್ಥೆಯೊಂದರಲ್ಲಿ ಉದ್ಯೋಗ ದೊರೆಯುವ ಅವಕಾಶ ಇದೆ. ಪದೋನ್ನತಿ ಸಿಗುವ ಯೋಗ ಇದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ಶುಭದಿನ: **23.** ಹನುಮಾನ್ ಚಾಲೀಸ್ ಪಠಿಸಿರಿ.

---




ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಕುಟುಂಬದಲ್ಲಿ ಭಿನ್ನಾಭಿಪ್ರಾಯ ತಲೆದೋರುವ ಸಾಧ್ಯತೆ ಇದೆ. ಮನೆಯಲ್ಲಿ ಧಾರ್ಮಿಕ ಆಚರಣೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಬಹಳ ಜವಾಬ್ದಾರಿಯುತ ಕೆಲಸವೊಂದಕ್ಕೆ ನಿಮ್ಮನ್ನು ನೇಮಿಸುವ ಸಾಧ್ಯತೆಗಳಿವೆ. ಉದ್ಯೋಗ ಸ್ಥಳದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಶುಭದಿನ: **22.** ವಿಷ್ಣು ಸಹಸ್ರನಾಮ ಪಠಿಸಿರಿ.

---





ಸಂಗಾತಿ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿ ಆಗಲಿದೆ. ಅವಿವಾಹಿತರಿಗೆ ಸೂಕ್ತ ಸಂಬಂಧ ದೊರೆಯುವ ಸಾಧ್ಯತೆ ಇದೆ. ದೂರ ಪ್ರಯಾಣ ಮುಂದಕ್ಕೆ ಹಾಕುವುದು ಒಳಿತು. ಇಲ್ಲದಿದ್ದಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾದೀತು. ವೃತ್ತಿ ಜೀವನದಲ್ಲೂ ಸವಾಲನ್ನು ಎದುರಿಸಬೇಕಾಗುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಭಿನ್ನಾಭಿಪ್ರಾಯಗಳು ಎದುರಾಗಬಹುದು. ಶುಭದಿನ: **19.** ಚಂಡಿ ಪಾರಾಯಣ ಮಾಡಿರಿ.

---





ತಾಯಿಯ ಸಂಬಂಧಿಕರಿಂದ ಪ್ರೀತಿ ವಾತ್ಸಲ್ಯ ದೊರೆಯುತ್ತದೆ. ಹಣಕಾಸು ವ್ಯವಹಾರದಲ್ಲಿ ಏಳ್ಗೆ ಇದೆ. ವಿರೋಧಿಗಳಿಂದ ಕಾನೂನು ವ್ಯಾಜ್ಯಗಳು ಎದುರಾಗಬಹುದು. ನಿಮ್ಮ ವರ್ಚಸ್ಸು ಬದಲಾಗಲಿದೆ. ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಲಿದ್ದೀರಿ. ಆಪ್ತರ ಜೊತೆಗೆ ಸುಮಧುರವಾದ ಕ್ಷಣಗಳನ್ನು ಕಳೆಯಲಿದ್ದೀರಿ. ಶುಭದಿನ: **20.** ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---




ಮಕ್ಕಳಿಗೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಆರ್ಥಿಕವಾಗಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಅತ್ಯುತ್ತಮ ಸಮಯ. ಹಲವು ಕ್ಷೇತ್ರದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಕಾನೂನು ವ್ಯಾಜ್ಯಗಳಲ್ಲಿ  ಎಚ್ಚರಿಕೆಯಿಂದ ಹೆಜ್ಜೆಗಳನ್ನು ಇಡಬೇಕು. ವಿರೋಧಿಗಳಿಂದ ಹಲವು ಬಗೆಯ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ. ಶುಭದಿನ: **19.** ಕಾಲಭೈರವನ ಸೇವೆ ಮಾಡಿರಿ.

---





ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಇದೆ. ವ್ಯಾಪಾರ ವ್ಯವಹಾರಗಳಲ್ಲೂ ಪ್ರಗತಿ ಇದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸುಮಧುರ ಕ್ಷಣಗಳನ್ನು ಕಳೆಯುವ ಯೋಗ ಇದೆ. ಈ ಹಿಂದಿಗಿಂತ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರುತ್ತದೆ. ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಫಲಿತಾಂಶ ಸಿಗಲಿದೆ. ಶುಭದಿನ: **23.** ಲಿಂಗಾಷ್ಟಕ ಪಠಿಸಿರಿ.

---





ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ದಾನ ಧರ್ಮ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಕೌಟುಂಬಿಕ ಜೀವನದಲ್ಲಿ ಸಂತೋಷ ಇರಲಿದೆ. ಪೋಷಕರ ಜೊತೆಗೆ ಸಂತೋಷದ ಸಮಯ ಕಳೆಯಲಿದ್ದೀರಿ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಶುಭದಿನ: **22.** ಶ್ರೀರಾಮರಕ್ಷಾ ಸ್ತೋತ್ರ ಓದಿರಿ.

---





ವೈಯಕ್ತಿಕ ಜೀವನದಲ್ಲಿ ಸಂಭ್ರಮದ ವಾತಾವರಣ ಇರಲಿದೆ. ಕುಟುಂಬದಲ್ಲಿ ಒಗ್ಗಟ್ಟು ಹೆಚ್ಚಾಗಲಿದೆ. ಆಸ್ತಿ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ವಿದೇಶಿ ವ್ಯವಹಾರ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ವಿರೋಧಿಗಳು ನಾನಾ ಬಗೆಯಲ್ಲಿ ಹಿಂಸೆ ನೀಡುವ ಸಾಧ್ಯತೆ ಇದೆ. ಆರೋಗ್ಯ ವಿಚಾರದಲ್ಲಿ ಎಚ್ಚರಿಕೆ ಇರಬೇಕು. ವಾಹನ, ಮನೆ ವಿಚಾರದಲ್ಲಿ ಪ್ರಗತಿ ಇದೆ. ಶುಭದಿನ: **19.** ನವದುರ್ಗಾ ಆರಾಧನೆ ಮಾಡಿರಿ.

---





ಆರೋಗ್ಯದಲ್ಲಿ ಸಮಸ್ಯೆಗಳಿದ್ದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ವ್ಯವಹಾರದಲ್ಲಿ ಪ್ರಗತಿಗೆ ಅವಕಾಶ ಇದೆ. ಸ್ಥಿರಾಸ್ತಿಯಲ್ಲಿ ಲಾಭ ಗಳಿಸುವ ಯೋಗ ಇದೆ. ವಿದೇಶಿ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಸ್ಥಿರವಾದ ಪ್ರಗತಿ ಇದೆ. ವಿರೋಧಿಗಳು ನಿಮ್ಮನ್ನು ಕಾನೂನು ಸಮಸ್ಯೆಗಳಲ್ಲಿ ಸಿಲುಕಿಸಬಹುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಹೆಚ್ಚು ಪಾಲ್ಗೊಳ್ಳಲಿದ್ದೀರಿ. ಶುಭದಿನ: **20.** ಶಿವಕವಚ ಪಠಣ ಮಾಡಿರಿ.

---




ಹಣಕಾಸು ಹೂಡಿಕೆಗೆ ಹಲವು ಅವಕಾಶಗಳು ದೊರೆಯಲಿವೆ. ಸಾಲ ಮರುಪಾವತಿಗೆ ಪ್ರಯತ್ನಪಡುತ್ತೀರಿ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ನಿಮ್ಮ ಸಂಗಾತಿ ನಿರ್ಲಕ್ಷ್ಯ ಮಾಡುತ್ತಿದ್ದಾರೇನೋ ಎಂಬ ಭಾವನೆ ಮೂಡಲಿದೆ. ಇಂಥ ವಿಚಾರಗಳನ್ನು ಬಹಳ ಎಚ್ಚರಿಕೆಯಿಂದ ನಿರ್ವಹಿಸಿ. ನೀವು ಅಂದುಕೊಂಡಂತೆ ಆಸ್ತಿ ವ್ಯವಹಾರಗಳು ನಡೆಯಲಿವೆ. ಶುಭದಿನ: **21.** ಲಲಿತಾ ಸಹಸ್ರನಾಮ ಪಠಿಸಿರಿ.

---




ನಿಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಲಿದೆ. ಸಂಬಂಧಿಕರಿಂದ ಮಹತ್ವದ ಮಾಹಿತಿ ದೊರೆಯಲಿದೆ. ರುಚಿಕಟ್ಟಾದ ಆಹಾರ ಸವಿಯುವ ಯೋಗ ಇದೆ. ಮಕ್ಕಳ ವಿಚಾರದಲ್ಲಿ ಶುಭ ಸುದ್ದಿ ಕೇಳುವಂಥ ಯೋಗ ಇದೆ. ಎಲ್ಲವೂ ಸರಿಯಾಗಿದೆ ಅಂದುಕೊಳ್ಳುವ ಹೊತ್ತಿಗೆ ಏರಿಳಿತ ಕಾಣಲಿದ್ದೀರಿ. ಹೊಸ ಸ್ಥಳಗಳಿಗೆ ಕೆಲ ಕಾಲ ತೆರಳಿ, ತಂಗಬೇಕಾದ ಸನ್ನಿವೇಶ ನಿರ್ಮಾಣ ಆಗಲಿದೆ. ಶುಭದಿನ: **18.** ಗಣಪತಿ, ಸುಬ್ರಹ್ಮಣ್ಯ ಜಪ ಮಾಡಿರಿ.